All India Radio: Bangalore
Regional Bulletin In Kannada
28.09.2025 / 6.40 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕಲ್ಯಾಣ ಕರ್ನಾಟಕದಲ್ಲಿ ಪ್ರವಾಹ ಪರಿಸ್ಥಿತಿ ; ಉಸ್ತುವಾರಿ ಸಚಿವರಿಂದ ಪರಿಶೀಲನೆ
- ಅಕ್ಟೋಬರ್ ೨ ರಂದು ಖಾದಿ ಉತ್ಪನ್ನಗಳನ್ನು ಖರೀದಿಸುವಂತೆ ಪ್ರಧಾನಿ ಕರೆ; ಮನ್ ಕೀ ಬಾತ್ ನಲ್ಲಿ ದಿವಂಗತ ಎಸ್. ಎಲ್. ಭೈರಪ್ಪ ಸ್ಮರಣೆ
- ಜಿಎಸ್‌ಟಿ ಕಡಿತದ ಮೂಲಕ ದೇಶಕ್ಕೆ ಪ್ರಧಾನಿ ಅಭೂತ ಪೂರ್ವ ಉಡುಗೊರೆ - ಕೇಂದ್ರ ಸಚಿವ ಪಲ್ಹಾದ್ ಜೋಶಿ
- ರಾಜ್ಯದೆಲ್ಲೆಡೆ ಮುಂದುವರೆದ ಸಾಮಾಜಿಕ, ಆರ್ಥಿಕ ಸಮೀಕ್ಷೆ ; ಗೈರಾದ ಶಿಕ್ಷಕರ ವಿರುದ್ಧ ಜಿಲ್ಲಾಡಳಿತದಿಂದ ಶಿಸ್ತು ಕ್ರಮದ ಎಚ್ಚರಿಕೆ

<><><><>

ಮಹಾರಾಷ್ಟ್ರದಲ್ಲಿ ನಿರಂತರ ಮಳೆ ಸುರಿಯುತ್ತಿರುವುದರಿಂದ ಜನ ಜೀವನ ಅಸ್ತವ್ಯಸ್ತಗೊಂಡಿದೆ. ಪರಿಣಾಮ ಕೃಷ್ಣ ಸೇರಿದಂತೆ ಹಲವು ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು, ಯಾದಗಿರಿ, ಕಲಬುರ್ಗಿ, ವಿಜಯಪುರದಲ್ಲಿ ಪ್ರವಾಹ ಪರಿಸ್ಥಿತಿ ಎದುರಾಗಿದೆ. ಯಾದಗಿರಿ ಜಿಲ್ಲೆಯಲ್ಲಿ ಭೀಮೆಯ ಪ್ರವಾಹದ ಸೆಳೆತಕ್ಕೆ ರಸ್ತೆಗಳು, ಸೇತುವೆಗಳು, ಜಮೀನುಗಳಲ್ಲಿ ಹುಲುಸಾಗಿ ಬೆಳೆದು ನಿಂತಿದ್ದ ಬೆಳೆಗಳು ಕೊಚ್ಚಿ ಹೋಗಿವೆ. ಮನೆಗಳು, ಕಟ್ಟಡಗಳು ಕುಸಿದು ಬಿದ್ದಿವೆ. ಹೊಲ ಗದ್ದೆಗಳಲ್ಲಿ ನೀರು ಹರಿಯುತ್ತಿರುವುದರಿಂದ ಅಪಾರ ಪ್ರಮಾಣ ಬೆಳೆಗಳಿಗೆ ನಷ್ಟವಾಗಿದೆ. ಪ್ರವಾಹದ ನೀರು ಹಳ್ಳಗಳಿಗೆ ವ್ಯಾಪಿಸಿಕೊಂಡಿದ್ದರಿಂದ ಗ್ರಾಮಗಳ ನಡುವಿನ ಸಂಪರ್ಕವೂ ಕಡಿತವಾಗಿದೆ. ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪ ದರ್ಶನಾಪುರ ಇಂದು ಮಳೆಯಿಂದ ಹಾನಿಗೊಳಗಾದ ಬೆಳೆ ಹಾಗೂ ಭೀಮಾ ನದಿ ಪ್ರವಾಹದಿಂದಾದ ಹಾನಿ ಬಗ್ಗೆ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಭೀಮಾ ಕೃಷ್ಣ ನದಿಗೆ ಅಪಾರ ಪ್ರಮಾಣದ ನೀರು ಹರಿದುಬರುತ್ತಿರುವದರಿಂದ ರೈತರ ಬೆಳೆ ಅಪಾರ ಪ್ರಮಾಣದಲ್ಲಿ ನಾಶವಾಗಿದೆ.

ಜಂಟಿ ಸಮೀಕ್ಷೆ ನಡೆಸಿ ಸಮಗ್ರ ಬೆಳೆನಾಶ ವರದಿ ಸರ್ಕಾರಕ್ಕೆ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

<><><>

ವಿಜಯಪುರ ಜಿಲ್ಲೆಯಲ್ಲಿಯೂ ಪ್ರವಾಹ ಪರಿಸ್ಥಿತಿಯಿಂದಾಗಿ ಹಲವಾರು ಕುಟುಂಬಗಳನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ. ದೇವರನಾವದಗಿಯ ಸರಕಾರಿ ಪ್ರಾಥಮಿಕ ಶಾಲೆಯಲ್ಲಿ ತೆರೆಯಲಾದ ಕಾಳಜಿ ಕೇಂದ್ರಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ಇಂದು ಭೇಟಿ ನೀಡಿ ಪರಿಶೀಲಿಸಿದರು. ಕಾಳಜಿ ಕೇಂದ್ರಗಳಲ್ಲಿ ಕಲ್ಪಿಸಿರುವ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಿದ ಅವರು, ಸಂತ್ರಸ್ಥರೊಂದಿಗೆ ಮಾತನಾಡಿ, ಯಾರು ಭಯ ಪಡುವ ಅವಶ್ಯಕತೆ ಇಲ್ಲ ಎಂದು ತಿಳಿಸಿದ್ದಾರೆ. ಸಂತ್ರಸ್ತರಿಗೆ ಊಟೋಪಚಾರ ಹಾಗೂ ಅಗತ್ಯ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಕುಮಸಗಿ ಗ್ರಾಮದಲ್ಲಿ ಭೀಮಾ ನದಿ ತೀರಕ್ಕೆ ಭೇಟಿ ನೀಡಿ, ಪ್ರವಾಹ ಪರಿಸ್ಥಿತಿಯ ಕುರಿತು ಅವಲೋಕಿಸಿದರು.

<><><>

ಭೀಮಾ ಪ್ರವಾಹದಿಂದ ತತ್ತರಿಸಿರುವ ಕಲಬುರಗಿ ತಾಲೂಕಿನ ಫರತಾಬಾದ, ಸರಡಗಿ ಗ್ರಾಮಕ್ಕೆ ಪ್ರಾದೇಶಿಕ ಆಯುಕ್ತ ಜಹೀರಾ ನಸ್ಸಿಮ್ ಭೇಟಿ ನೀಡಿ ಪರಿಶೀಲಿಸಿದರು. ತಹಶೀಲ್ದಾರ್ ಕೆ.ಅನಂದಶೀಲ ಅವರಿಂದ ಸಂತ್ರಸ್ತರ ಸ್ಥಳಾಂತರ, ಕಾಳಜಿ ಕೇಂದ್ರ ಸೇರಿದಂತೆ ಇನ್ನಿತರೆ ಮಾಹಿತಿ ಪಡೆದ ಅವರು, ಯಾವುದೇ ಮಾನವ ಹಾನಿಯಾಗದಂತೆ ಅಧಿಕಾರಿಗಳು ಸ್ಥಳದಲ್ಲಿದ್ದು, ಜನರನ್ನು ಸಂರಕ್ಷಿಸಬೇಕು ಎಂದು ಸೂಚನೆ ನೀಡಿದ್ದಾರೆ. ಕಾಳಜಿ ಕೇಂದ್ರಕ್ಕೂ ಭೇಟಿ ನೀಡಿದ ಅವರು, ಸಂತ್ರಸ್ತರಿಗೆ ಎಲ್ಲಾ ರೀತಿಯ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><><>

ತಮ್ಮ ದೈನಂದಿನ ಜೀವನದಲ್ಲಿ 'ಸ್ವದೇಶಿ' ಅಳವಡಿಸಿಕೊಳ್ಳುವಂತೆ ಪ್ರಧಾನಿ ನರೇಂದ್ರ ಮೋದಿ ತಮ್ಮ ಮನ್ ಕೀ ಬಾತ್ ನ ೧೨೬ನೇ ಸಂಚಿಕೆಯಲ್ಲಿ ಕರೆ ನೀಡಿದ್ದಾರೆ. ಅಕ್ಟೋಬರ್ ೨ ರಂದು ಖಾದಿ ಉತ್ಪನ್ನಗಳನ್ನು ಖರೀದಿಸಲು ಜನರಲ್ಲಿ ಮನವಿ ಮಾಡಿದ್ದಾರೆ. ಅಕ್ಟೋಬರ್ ೭ ರಂದು ಮಹರ್ಷಿ ವಾಲ್ಮೀಕಿ ಜಯಂತಿ ಆಚರಿಸಲಾಗುತ್ತಿದ್ದು, ಇವರು ಭಾರತೀಯ ಸಂಸ್ಕೃತಿಯ ಅತಿ

ದೊಡ್ಡ ಆಧಾರವೆಂದು ನಮಗೆಲ್ಲಾ ತಿಳಿದೇ ಇದೆ. ವಾಲ್ಮೀಕಿ, ಮಾನವ ಕುಲಕ್ಕೆ ರಾಮಾಯಣದಂತಹ ಅದ್ಭುತ ಗ್ರಂಥವನ್ನು ನೀಡಿದ್ದಾರೆ ಎಂದು ಹೇಳಿದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೦ ಸೆಕೆಂಡುಗಳು)

<><><>

ಪ್ರಧಾನಿ ನರೇಂದ್ರ ಮೋದಿ ಮನ್ ಕಿ ಬಾತ್ ನಲ್ಲಿ ಇಂದು ಮಹಾನ್ ವಿಚಾರವಾದಿ, ಚಿಂತಕ ದಿವಂಗತ ಡಾ.ಎಸ್.ಎಲ್.ಭೈರಪ್ಪ ಅವರನ್ನು ಸ್ಮರಿಸಿದ್ದಾರೆ. ಯುವಜನತೆ ಅವರ ಕೃತಿಗಳನ್ನು ಓದಬೇಕೆಂದು ಮನವಿ ಮಾಡಿದ್ದಾರೆ. ಮೋದಿ ಅವರು ಭೈರಪ್ಪನವರ ಬಗ್ಗೆ ಮಾತನಾಡಿದ್ದು ಇಡೀ ದೇಶವಾಸಿಗಳಿಗೆ ತುಂಬಾ ಸಂತೋಷವಾಗಿದೆ ಎಂದು ಆಕಾಶವಾಣಿಯೊಂದಿಗೆ ಮೈಸೂರಿನ ಅವರ ಒಡನಾಡಿ ಡಾ ಹೇಮಾ ನಂದೀಶ್ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ : ಡಾ. ಹೇಮಾ ನಂದೀಶ್ (೨೫ ಸೆಕೆಂಡುಗಳು)

<><><>

ಪ್ರಧಾನಿ ನರೇಂದ್ರ ಮೋದಿ ಅವರು ಜಿಎಸ್‌ಟಿ ಕಡಿತದ ಮೂಲಕ ಎಲ್ಲದರ ಬೆಲೆ ಕಡಿಮೆಗೊಳಿಸಿ ಅಭೂತಪೂರ್ವ ಉಡುಗೊರೆಯನ್ನೇ ನೀಡಿದ್ದಾರೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸರಕು ಸೇವೆಗಳ ತೆರಿಗೆ ವಿನಾಯಿತಿ ಸಂಭ್ರಮ, ಸಮಾರಂಭದಲ್ಲಿ ಭಾಗಿಯಾಗಿ ಮಾತನಾಡಿದ ಅವರು, ಸಿಮೆಂಟ್, ಸ್ಟೀಲ್ ಉತ್ಪಾದನೆ ಹಿಂದೆ ಕಷ್ಟವಾಗಿತ್ತು. ಈಗ ಸರಳೀಕರಣ ಮಾಡಲಾಗಿದೆ. ಕೃಷಿ, ಆಹಾರ, ಔಷಧಿ ವಸ್ತುಗಳ ಮೇಲೆ ಜಿಎಸ್‌ಟಿ ಕಡಿತಗೊಳಿಸಲಾಗಿದೆ ಎಂದು ಹೇಳಿದ್ದಾರೆ.

ಧ್ವನಿ : ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ (೩೪ ಸೆಕೆಂಡುಗಳು)

<><><>

ರಾಜ್ಯದೆಲ್ಲೆಡೆ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ನಡೆಸಲಾಗುವ ಆರ್ಥಿಕ, ಸಾಮಾಜಿಕ ಸಮೀಕ್ಷೆ ಮುಂದುವರೆದಿದೆ. ಇಂದು ಸುಮಾರು ೧೦ ಲಕ್ಷ ಮನೆಗಳ ಸಮೀಕ್ಷೆ ನಡೆಸಲಾಗಿದೆ ಎಂದು ಮುಖ್ಯಮಂತ್ರಿ ಕಚೇರಿ ತಿಳಿಸಿದೆ. ಮೈಸೂರಿನಲ್ಲಿ ಜಿಲ್ಲಾಧಿಕಾರಿ ಜಿ. ಲಕ್ಷ್ಮೀ ಕಾಂತ ರೆಡ್ಡಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಎಸ್.ಯುಕೇಶ್ ಕುಮಾರ್ ಖುದ್ದಾಗಿ ಸಮೀಕ್ಷಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಸಮೀಕ್ಷೆಯ ವೇಳೆ ಎದುರಾಗುವ ಸಮಸ್ಯೆಗಳ ಕುರಿತು ಗಣತಿದಾರರೊಂದಿಗೆ ಚರ್ಚಿಸಿ, ಸಮೀಕ್ಷಾ ಕಾರ್ಯವನ್ನು ನಿಗದಿತ

ಅವಧಿಯೊಳಗೆ ಪೂರ್ಣಗೊಳಿಸಬೇಕೆಂದು ನಿರ್ದೇಶಿಸಿದರು. ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯದಲ್ಲಿ ನಿರ್ಲಕ್ಷ್ಯ ತೋರಿದರೆ ತಹಶೀಲ್ದಾರ್ ಸಂಪೂರ್ಣ ವೈಫಲ್ಯವೆಂದು ಪರಿಗಣಿಸಲಾಗುವುದು ಎಂದು ಕೋಲಾರ ಜಿಲ್ಲಾಧಿಕಾರಿ ಡಾ.ಎಂ.ಆರ್ .ರವಿ ಎಚ್ಚರಿಕೆ ನೀಡಿದ್ದಾರೆ. ಮೂರು ದಿನಗಳ ಹಿಂದೆ ಸಮೀಕ್ಷೆ ಆರಂಭಗೊಂಡಿದ್ದರೂ ಕೆ.ಜಿ.ಎಫ್ ತಾಲೂಕಿನಲ್ಲಿ ಕೇವಲ ೬೮೧ ಮನೆಗಳ ಸಮೀಕ್ಷೆ ಪೂರ್ಣಗೊಂಡಿದ್ದು, ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತ ಪಡಿಸಿದ್ದಾರೆ. ಮಂಡ್ಯ ಜಿಲ್ಲೆಯಲ್ಲಿ ಸಮೀಕ್ಷೆಗೆ ಗೈರಾದ ಶಿಕ್ಷಕರು ನಾಳೆ ಬೆಳಿಗ್ಗೆ ೭ ಗಂಟೆಗೆ ತಮ್ಮ ವ್ಯಾಪ್ತಿಯ ತಹಶೀಲ್ದಾರ್ ಬಳಿ ವರದಿಮಾಡಿಕೊಳ್ಳಬೇಕು. ಇಲ್ಲವಾದಲ್ಲಿ ಅಮಾನತುಗೊಳಿಸಿ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಎಚ್ಚರಿಕೆ ನೀಡಿದ್ದಾರೆ.

<><><>

ಕಾಂಗ್ರೆಸ್ ಸರ್ಕಾರ ನಡೆಸುತ್ತಿರುವ ಸಾಮಾಜಿಕ, ಆರ್ಥಿಕ ಸಮೀಕ್ಷೆ ಸಂದರ್ಭದಲ್ಲಿ ಜನರು ವೈಯಕ್ತಿಕ ಮಾಹಿತಿಗಳನ್ನು ನೀಡಲೇಬೇಕು ಎಂಬ ನಿಯಮವಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದಿನ ಬಜೆಟ್ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಕಗ್ಗಂಟಾಗಿದೆ ಎಂದು ವ್ಯಂಗ್ಯವಾಡಿದ್ದಾರೆ. ಇದು ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆ ಅಲ್ಲ, ಇದು ಕಾಂಗ್ರೆಸ್ ನ ಜಾತಿ ಸಮೀಕ್ಷೆ ಎಂದು ದೂರಿದ್ದಾರೆ.

<><><>

ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಇಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಖಿಲ ಕರ್ನಾಟಕ ಕುವೆಂಪು ಸಾಂಸ್ಕೃತಿಕ ವೇದಿಕೆ ವತಿಯಿಂದ ನೀಡಲಾಗುವ ವಿಶ್ವ ಚೇತನ ಪ್ರಶಸ್ತಿಯನ್ನು ಐಸಿಎಆರ್ -ಐಐಹೆಚ್ಆರ್ ನಿವೃತ್ತ ಪ್ರಧಾನ ವಿಜ್ಞಾನಿ ಡಾ. ಬಿ.ನಾರಾಯಣಸ್ವಾಮಿ ಅವರಿಗೆ ಪ್ರದಾನ ಮಾಡಲಾಯಿತು. ಹಿರಿಯ ಸಾಹಿತಿ ಪ್ರೊ. ಹಂಪನಾಗರಾಜಯ್ಯ ಪ್ರಶಸ್ತಿ ಪ್ರದಾನ ಮಾಡಿದರು. ಇದೇ ಮೊದಲ ಬಾರಿಗೆ ಕೃಷಿ ಕ್ಷೇತ್ರದ ಸಾಧನೆಗಾಗಿ ಪ್ರಶಸ್ತಿ ನೀಡಲಾಗಿದೆ. ೪೮೬ ಕನ್ನಡ ಲೇಖನಗಳು, ೩೬ ಕನ್ನಡ ಪುಸ್ತಕಗಳು ಹಾಗೂ ತೋಟಗಾರಿಕಾ ಸಂಶೋಧನಾ ಸಂಸ್ಥೆಯಲ್ಲಿ ನಡೆದ ರಾಷ್ಟ್ರಮಟ್ಟದ ತೋಟಗಾರಿಕಾ ಮೇಳದಲ್ಲಿ ಲಕ್ಷಾಂತರ ಕೃಷಿಕರನ್ನು ಸೆಳೆದು, ಕೃಷಿ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ ಸೇವೆಯನ್ನು ಗುರುತಿಸಿ ಡಾ. ಬಿ. ನಾರಾಯಣ ಸ್ವಾಮಿ ಅವರಿಗೆ ಪ್ರಶಸ್ತಿ ನೀಡಲಾಗಿದೆ.

<><><><>

ಗ್ರೇಟರ್ ಬೆಂಗಳೂರು ಪ್ರಾಧಿಕಾರವು "ಭಾರತೀಯ ಕಾಂಕ್ರೀಟ್ ಸಂಸ್ಥೆ ಅಲ್ಟ್ರಾಟೆಕ್ ಪ್ರಶಸ್ತಿಗೆ ಭಾಜನವಾಗಿದೆ. ಬೆಂಗಳೂರು ನಗರದ ಕೊರಮಂಗಲ ಪ್ರದೇಶದ ೧ನೇ ಕ್ರಾಸ್ ಎಂಪೈರ್ ರಸ್ತೆ ಮತ್ತು ೭ನೇ ಕ್ರಾಸ್ ರಸ್ತೆಗಳಲ್ಲಿ ಅನುಷ್ಠಾನಗೊಳಿಸಲಾದ ಥಿನ್ ವೈಟ್ ಟಾಪಿಂಗ್ ಕಾಮಗಾರಿ ವಿನ್ಯಾಸ ಮತ್ತು ಅನುಷ್ಠಾನಕ್ಕೆ ಈ ಗೌರವ ಸಂದಿದೆ.

ಬೆಂಗಳೂರು ನಗರದಲ್ಲಿ ವೈಟ್ ಟಾಪಿಂಗ್ ರಸ್ತೆಗಳಿಗೆ ೧೮೦ ಎಂ.ಎಂ ದಪ್ಪವಿರುವ ವಿನ್ಯಾಸ ಬಳಸಲಾಗುತ್ತಿತ್ತು. ಹೊಸ ಯೋಜನೆಯಲ್ಲಿ, ಜಿಬಿಎಯ ಅಭಿಯಂತರರ ತಂಡವು ೧೨೫ ಮಿಮೀ ದಪ್ಪದ ಹೊಸ ವಿನ್ಯಾಸವನ್ನು ಯಶಸ್ವಿಯಾಗಿ ರೂಪಿಸಿ ಜಾರಿಗೊಳಿಸಿದೆ.

<><><><>

ನಮ್ಮಲ್ಲಿರುವ ಅನೇಕ ಕಲೆ, ಸಂಸ್ಕೃತಿಗಳು ನಾಶಗೊಳ್ಳುತ್ತಿದ್ದು, ಈ ಕ್ಷೇತ್ರದ ಅಭಿವೃದ್ಧಿಗೆ ಸಾಕಷ್ಟು ಸವಾಲುಗಳನ್ನು ಎದುರಿಸಬೇಕಾಗಿದೆ ಎಂದು ಶಾಸಕ ತನ್ವೀರ್ ಸೇಠ್ ತಿಳಿಸಿದ್ದಾರೆ. ಮೈಸೂರು ದಸರಾ ಮಹೋತ್ಸವದ ಅಂಗವಾಗಿ ಲಲಿತ ಕಲೆ ಮತ್ತು ಕರಕುಶಲ ಕಲೆ ಉಪ ಸಮಿತಿ ವತಿಯಿಂದ ಆಯೋಜಿಸಲಾಗಿದ್ದ ಕಲಾ ಜಾತ್ರೆ ಉದ್ಘಾಟನೆ, ನೆರವೇರಿ ಮಾತನಾಡಿದ ಅವರು ಇಂದು ಸಾಂಪ್ರದಾಯಿಕ ಕಲೆಗಳ ವೃತ್ತಿ ಮಾಡಿಕೊಳ್ಳಲು ಅನೇಕ ಸವಾಲುಗಳನ್ನು ಎದುರಿಸಬೇಕಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ಮೈಸೂರಿನಲ್ಲಿ ದಸರಾ ಸಂಭ್ರಮ ಕಳೆಕಟ್ಟಿದೆ. ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಇಂದು ದೇಶ, ವಿದೇಶದ ಶ್ವಾನಗಳು ಆಕರ್ಷಿಸಿದವು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>